ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ

ಸಿ.ಸಿ. ಸಂಖ್ಯೆ **: 211/2025**

| | | |
|---|---|---|
| ಪಿರ್ಯಾದಿ | : | ರಾಜ್ಯ, ಪರವಾಗಿ ಬಣಕಲ್ ಪೊಲೀಸ್ ಠಾಣೆ,<br>ಮೂಡಿಗೆರೆ ತಾಲ್ಲೂಕು. |

ವಿರುದ್ಧ

| | | |
|---|---|---|
| ಆರೋಪಿ | : | ಶ್ರೀ ಬಿ.ಕೆ. ಸುಂದರೇಶ, ವಯಸ್ಸು 36 ವರ್ಷ,<br>ಬಿನ್ ಕಾಳೇಗೌಡ,<br>ವಾಸಃ ಬೆಟ್ಟಗೆರೆ ಗ್ರಾಮ, ಬಣಕಲ್ ಹೋಬಳಿ,<br>ಮೂಡಿಗೆರೆ ತಾಲ್ಲೂಕು. |

ದೋಷಾರೋಪಣೆ

ಶ್ರೀಮತಿ ಸುರಕ್ಷ ಕೆ.ಕೆ., ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ಮೂಡಿಗೆರೆ, ಆದ ನಾನು, ಆರೋಪಿಯಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆ:-

ದಿನಾಂಕ 24.10.2024 ರಂದು ಸಂಜೆ 6.10 ರ ಸಮಯದಲ್ಲಿ ಬಣಕಲ್ ಪೊಲೀಸ್ ಠಾಣಾ ವ್ಯಾಪ್ತಿಯ ಬೆಟ್ಟಗೆರೆ ಗ್ರಾಮದ ಲಕ್ಷ್ಮಣಗೌಡ ರವರ ತೋಟದ ಮುಂಭಾಗ ಸರ್ಕಾರಿ ಜಾಗದಲ್ಲಿ ಆರೋಪಿಯಾದ ನೀವು ಸುಂದರೇಶ್ ರವರ ದಿನಸಿ ಅಂಗಡಿಯಲ್ಲಿ ಯಾವುದೇ ಮದ್ಯದ ಪರವಾನಗಿ ಇಲ್ಲದೇ ಅಕ್ರಮವಾಗಿ 1,360 ರೂಪಾಯಿ ಮೌಲ್ಯದ 90 ಎಂ.ಎಲ್.ನ ಕ್ಯಾಪ್ಟನ್ ಮಾರ್ಟಿನ್ ಸ್ಪೆಷಲ್ ಮಾಲ್ಟ್ ವಿಸ್ಕಿಯ 34 ಮದ್ಯ ತುಂಬಿದ ಟೆಟ್ರಾ ಪ್ಯಾಕ್ ಗಳನ್ನು ಮಾರಾಟ ಮಾಡುವ ಉದ್ದೇಶದಿಂದ ಸಂಗ್ರಹ ಮಾಡಿ ಇಟ್ಟುಕೊಂಡಿದ್ದು, ಪೊಲೀಸರು ನಡೆಸಿದ ದಾಳಿ ಕಾಲಕ್ಕೆ ಸಿಕ್ಕಿರುತ್ತೀರಿ. ಈ ರೀತ್ಯಾ ಆರೋಪಿಯಾದ ನೀವು ಕರ್ನಾಟಕ ಅಬಕಾರಿ ಕಾಯ್ದೆ ಕಲಂ **32** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ?

**2.** ಮೇಲೆ ಹೇಳಿದ ದಿನಾಂಕ, ಸ್ಥಳ ಮತ್ತು ಸಮಯದಲ್ಲಿ ಆರೋಪಿಯಾದ ನೀವು ಸದರಿ ಮದ್ಯವನ್ನು ಯಾವುದೇ ಪಾಸ್ ಅಥವಾ ಪರವಾನಗಿ ಇಲ್ಲದೇ ಅಕ್ರಮವಾಗಿ ನಿಮ್ಮ ವಶದಲ್ಲಿಟ್ಟುಕೊಂಡು ಪೊಲೀಸರು ನಡೆಸಿದ ದಾಳಿ ಕಾಲಕ್ಕೆ ಸಿಕ್ಕಿರುತ್ತೀರಿ. ಈ ರೀತ್ಯಾ ಆರೋಪಿಯಾದ ನೀವು ಕರ್ನಾಟಕ ಅಬಕಾರಿ ಕಾಯ್ದೆ ಕಲಂ **34** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ?

ಸದರಿ ಮೇಲ್ಕಂಡ ಆರೋಪಗಳನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಮಾಡಿದ್ದರಿಂದ, ಅವುಗಳು ಈ ನ್ಯಾಯಾಲಯದಿಂದ ವಿಚಾರಣೆಯಾಗತಕ್ಕದೆಂದು ಆದೇಶಿಸಲಾಗಿದೆ.

ಪ್ರ: 1. ಈಗ ಮೇಲೆ ಓದಿ ಹೇಳಿದ ದೋಷಾರೋಪಣೆಯನ್ನು ಕೇಳಿದ್ದೀರಾ? ಅವುಗಳು ನಿಮಗೆ ಅರ್ಥವಾಯಿತೇ?

ಆರೋಪಿಯ ಉತ್ತರ:

ಪ್ರ: 2. ನೀವು ದೋಷಾರೋಪಣೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ?

ಆರೋಪಿಯ ಉತ್ತರ:

*(*ಆರೋಪಿಗೆ ದಿನಾಂಕ 17.05.2025 ರಂದು ದೋಷಾರೋಪಣೆಯನ್ನು ಅವರಿಗೆ ತಿಳಿಯುವ ಭಾಷೆಯಲ್ಲಿ ಓದಿ, ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು. ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣೀಕರಿಸುತ್ತೇನೆ*)*

ಸಹಿ/-

ಮೂಡಿಗೆರೆ
ದಿನಾಂಕ: 17.05.2025

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ ಮೂಡಿಗೆರೆ.